# ಪುನರ್ ಪರಿಶೀಲನಾ ಅರ್ಜಿ ಸಲ್ಲಿಕೆ: ಮಾಧುಸ್ವಾಮಿ

ವಿಧಾನ ಪರಿಷತ್: ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್ಸಿ) 2011ನೇ ಸಾಲಿನ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ನೇಮಕಾತಿ ರದ್ದುಗೊಂಡಿರುವ ವಿಚಾರದಲ್ಲಿ ಸರ್ಕಾರವು ಅಭ್ಯರ್ಥಿಗಳ ಪರವಾಗಿದ್ದು, ನ್ಯಾಯಾಲಯದಲ್ಲಿ ಪುನರ್ ಪರಿಶೀಲನಾ ಅರ್ಜಿ ಸಲ್ಲಿಸಲಿದೆ ಎಂದು ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ಹೇಳಿದರು. 2011ನೇ ಸಾಲಿನ ಗೆಜೆಟೆಡ್ ಪ್ರೊಬೆಷನರಿ 362 ಹುದ್ದೆಯ ನೇಮಕಾತಿ ರದ್ದತಿ ಕುರಿತು ಸದಸ್ಯರಾದ ಪಿ.ಆರ್.ರಮೇಶ್, ಬಸವರಾಜ ಹೊರಟ್ಟಿ, ಮರಿತಿಬ್ಬೇಗೌಡ, ಶ್ರೀಕಂಠೇಗೌಡ, ಅಪ್ಪಾಜಿ ಗೌಡ, ಚೌಡರೆಡ್ಡಿ ತೂಪಲ್ಲಿಯವರು ನಿಯಮ 330ರ ಅಡಿಯಲ್ಲಿ ಪ್ರಸ್ತಾಪಿಸಿದರು. 2011ನೇ ಸಾಲಿನ ಗೆಜೆಟೆಡ್ ಪ್ರೊಬೆಷನರಿ ನೇಮಕಾತಿ ರದ್ದತಿ ವಿಚಾರವಾಗಿ ನೇಮಕಾತಿ ರದ್ದತಿ ವಾಪಸ್ ಪಡೆಯಲು ಸಾಧ್ಯವಿಲ್ಲ, ಇದು ಹೈಕೋರ್ಟ್, ಸುಪ್ರೀಕೋರ್ಟ್‌ನಲ್ಲಿ ಸುದೀರ್ಘ ವಿಚಾರಣೆ ನಡೆದು, ನ್ಯಾಯಾಲಯದ ತೀರ್ಪಿನಂತೆ ರದ್ದಾಗಿದೆ. ಆದರೂ, ಸರ್ಕಾರ ಅಭ್ಯರ್ಥಿಗಳಿಗೆ ಪರವಾಗಿದೆ. ಮಾನವೀಯತೆ ದೃಷ್ಟಿಯಿಂದ ನ್ಯಾಯಾಲಯದಲ್ಲಿ ಸರ್ಕಾರ ಪುನರ್ ಪರಿಶೀಲನಾ ಅರ್ಜಿ ಸಲ್ಲಿಸಲಿದೆ. ಆದರೆ, ನ್ಯಾಯಾಲಯದ ಇದನ್ನು ಮಾನ್ಯ ಮಾಡುತ್ತದೆಯೋ ಅಥವಾ ಇಲ್ಲವೋ ಗೊತ್ತಿಲ್ಲ, ಅಭ್ಯರ್ಥಿಗಳ ಪರವಾಗಿ ಸರ್ಕಾರ ಪ್ರಯತ್ನ ಮಾಡಲಿದೆ ಎಂದು ಸಚಿವ ಮಾಧುಸ್ವಾಮಿ ಹೇಳಿದರು.